ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಕಾಮಗಾರಿಯನ್ನು ಯಾವಾಗ ಮಾಡಲಾಗುವುದು? (ಮಾಹಿತಿ ನೀಡುವುದು)

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಮಾರ್ಗಸೂಚಿಗಳ ಪ್ರಕಾರ, 1,20,000 ಜನಸಂಖ್ಯೆ ಒಂದರಂತೆ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿದ್ದು, ಲಿಂಗಸುಗೂರು ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ 2,47,326 ಆಗಿದ್ದು, 2 ಸಮುದಾಯ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿದೆ. ಆದರೆ, ಸದರಿ ತಾಲ್ಲೂಕಿನಲ್ಲಿ ಈಗಾಗಲೇ 3 ಸಮುದಾಯ ಆರೋಗ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. ಆದುದರಿಂದ ಮಸ್ಕಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಅವಕಾಶ ಇರುವುದಿಲ್ಲ.

ಮುಂದುವರೆದು, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿ ಮೇಲ್ದರ್ಜೆಗೇರಿಸುವಿಕೆಯನ್ನು ಒಂದು ನೀತಿ ನಿರ್ಣಯವಾಗಿ ದಿನಾಂಕ : 11–01–2011 ರಿಂದ ಮೂರು ವರ್ಷಗಳ ಅವಧಿಗೆ ಸರ್ಕಾರವು ತಡೆ ಹಿಡಿದಿದೆ.

ಉಪನ್ಯಾಸಕರ ಕೊರತೆ

232(883) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮದ್ದೂರು ಟೌನ್‌ನಲ್ಲಿರುವ ಮಹಿಳಾ ದರ್ಜೆ ಕಾಲೇಜಿನ ಉಪನ್ಯಾಸಕರನ್ನು ಬೇರೆ ಕಡೆ ನಿಯೋಜನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸದರಿ ಕಾಲೇಜಿನಲ್ಲೇ ಉಪನ್ಯಾಸಕರ ಕೊರತೆಯಿದ್ದರೂ ಸಹ ಬೇರೆಕಡೆ ನಿಯೋಜನೆ ಮಾಡಲು ಕಾರಣವೇನು ; ಈ ನಿಯೋಜನೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ವಿದ್ಯಾರ್ಥಿಗಳ ತೊಂದರೆಯನ್ನು ತಪ್ಪಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು (ಮಾಹಿತಿ ನೀಡುವುದು) ?

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಶ್ರೀಮತಿ ಎಸ್.ಶಶಿಕಲಾ ಮತ್ತು ಶ್ರೀಮತಿ ಹೆಚ್.ಎಂ. ಪ್ರಭಾ, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು ಹೆಚ್ಚುವರಿಯಾಗಿದ್ದು, ಅವರುಗಳನ್ನು ಕಾರ್ಯಭಾರವಿರುವ ಇತರೆ ಕಾಲೇಜುಗಳಿಗೆ ನಿಯೋಜನೆ ಮಾಡಲಾಗಿದೆ. ಶ್ರೀ ಎಸ್.ಬಿ. ಪ್ರಸಾದ್, ಅರ್ಥಶಾಸ್ತ್ರ ಉಪನ್ಯಾಸಕರು ಹಾಗೂ ಶ್ರೀ ಹೆಚ್.ಆರ್. ಶೇಖರ್, ರಾಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕರು, ಇವರುಗಳನ್ನು ದೂರಿನ ಮೇಲೆ ಬೇರೆ ಕಾಲೇಜುಗಳಿಗೆ ನಿಯೋಜನೆ ಮಾಡಲಾಗಿದೆ. ಸದರಿ ನಿಯೋಜನೆಯಿಂದ ವಿದ್ಯಾರ್ಥಿಗಳ ಪಾಠ ಪ್ರವಚನಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.

ಇ) ವಿದ್ಯಾರ್ಥಿಗಳಿಗೆ ಆಗುವ ತೊಂದರೆಯನ್ನು ತಪ್ಪಿಸಲು ಕಾರ್ಯಭಾರ ಕ್ಕನುಗುಣವಾಗಿ ಅತಿಥಿ ಉಪನ್ಯಾಸಕರುಗಳನ್ನು ನೇಮಿಸಿಕೊಳ್ಳಲಾಗುವುದು.

ಜಮಖಂಡಿ ಆಸ್ಪತ್ರೆಗೆ ವೈದ್ಯರುಗಳ ನೇಮಕ

238 (178) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಜಮಖಂಡಿ ನಗರದಲ್ಲಿರುವ 100 ಹಾಸಿಗೆಯುಳ್ಳ ಸರ್ಕಾರಿ ಆಸ್ಪತ್ರೆಯಲ್ಲಿರುವ ವೈದ್ಯರ ಹುದ್ದೆಗಳೆಷ್ಟು ;

ಆ) ಖಾಲಿ ಇರುವ ಹುದ್ದೆಗಳೆಷ್ಟು ;

ಇ) ಮುಖ್ಯ ವೈದ್ಯಾಧಿಕಾರಿಗಳ ಹುದ್ದೆ ಎಷ್ಟು ವರ್ಷದಿಂದ ತೆರವಿದೆ ;

ಈ) ಈ ಕೊರತೆಗಳನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳಾವುವು?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ಮತ್ತು ಆ) ಜಮಖಂಡಿ ತಾಲ್ಲೂಕು ಆಸ್ಪತ್ರೆಯಲ್ಲಿ 8 ತಜ್ಞ ವೈದ್ಯರು, 1 ಮುಖ್ಯ ವೈದ್ಯಾಧಿಕಾರಿ, 1 ಹಿರಿಯ ವೈದ್ಯಾಧಿಕಾರಿ ಹಾಗೂ 1 ದಂತ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿವೆ. ಆ ಪೈಕಿ 5 ಹುದ್ದೆಗಳು ಭರ್ತಿಯಾಗಿದ್ದು, 6 ಹುದ್ದೆಗಳು ಖಾಲಿ ಇವೆ.